ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಶಶೀಲ್ ಜಿ. ನಮೋಶಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1386

ಉತ್ತರಿಸಬೇಕಾದ ದಿನಾಂಕ : 16.03.2021

ಕ್ರ ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಸಹಕಾರ ಇಲಾಖೆಯಿಂದ ರೈತರಿಗಾಗಿ ಇರುವ ವಿವಿಧ ಸಾಲದ ಯೋಜನೆಗಳು ಯಾವವು; (ಸಾಲ ಯೋಜನೆಗಳು ನಿಯಮಗಳ ಸಂಪೂರ್ಣ ಮಾಹಿತಿ ನೀಡುವುದು)	ರಾಜ್ಯದಲ್ಲಿ ರೈತರಿಗಾಗಿ ಇರುವ ವಿವಿಧ ಸಾಲ ಯೋಜನೆಗಳು ಹಾಗೂ ಈ ಸಾಲ ಯೋಜನೆಯ ನಿಯಮಗಳ ಸಂಪೂರ್ಣ ಮಾಹಿತಿ ಈ ಕೆಳಗಿನಂತಿದೆ. **1. ಒಂದು ಕುಟುಂಬಕ್ಕೆ ರೂ. 3.00 ಲಕ್ಷಗಳವರೆಗೆ ಶೂನ್ಯ ಬಡ್ಡಿ ದರದಲ್ಲಿ ಅಲ್ಪಾವಧಿ ಬೆಳೆ ಸಾಲ ಮತ್ತು ಪಶುಸಂಗೋಪನೆ/ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳವಾಗಿ ರೂ.2.00 ಲಕ್ಷಗಳವರೆಗೆ ಶೂನ್ಯ ಬಡ್ಡಿದರದ ಸಾಲದ ಯೋಜನೆ:-** • ಈ ಯೋಜನೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಪಿಕಾರ್ಡ್ ಬ್ಯಾಂಕ್ ಅಥವಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಲ್ಲಿ ರೈತನು ಪಡೆದ ಬೆಳೆ ಸಾಲ/ ಹೈನುಗಾರಿಕೆ / ಮೀನುಗಾರಿಕೆ ಸಾಲಗಳಿಗೆ ಅನ್ವಯವಾಗುತ್ತದೆ. • ಈ ಯೋಜನೆಯು ಒಬ್ಬ ಫಲಾನುಭವಿಗೆ ಗರಿಷ್ಠ ರೂ.2.00 ಲಕ್ಷಗಳಿಗೆ ನೀಡಿದ ಸಾಲಗಳಿಗೆ ಮಾತ್ರ ಅನ್ವಯವಾಗುತ್ತದೆ. ಒಂದು ಕುಟುಂಬಕ್ಕೆ ಬೆಳೆ ಸಾಲ, ಪಶುಸಂಗೋಪನೆ ಮತ್ತು ಮೀನುಗಾರಿಕೆ ದುಡಿಯುವ ಬಂಡವಾಳದ ಸಾಲ ಒಟ್ಟು ಸೇರಿ ರೂ.3.00 ಲಕ್ಷಗಳಿಗೆ ಮೀರತಕ್ಕದ್ದಲ್ಲ. • ರೈತನು ರೂ.20,000-ಗಳ ವೇತನ/ಪಿಂಚಣಿ ಪಡೆಯುತ್ತಿದ್ದರೆ ಅಥವಾ ಆದಾಯ ತೆರಿಗೆ ಪಾವತಿದಾರರಾಗಿದ್ದಲ್ಲಿ ಬಡ್ಡಿ ಸಹಾಯಧನ ಲಭಿಸುವುದಿಲ್ಲ. • ಬಡ್ಡಿ ಸಹಾಯಧನ ಜಿಲ್ಲಾ ಮಟ್ಟದ ತಾಂತ್ರಿಕ ಸಮಿತಿ ನಿಗದಿಪಡಿಸಿದ ಸ್ಕೇಲ್ ಆಫ್ ಫೈನಾನ್ಸ್‌ಗೆ ಮಾತ್ರ ಲಭಿಸುತ್ತದೆ. • ರೈತನು ಸಂಘವು ನಿಗದಿಪಡಿಸಿದ ಗಡುವಿನ ದಿನಾಂಕದೊಳಗೆ ಅಸಲು ಮರುಪಾವತಿಸಬೇಕು **2. ಒಂದು ಕುಟುಂಬಕ್ಕೆ 10.00 ಲಕ್ಷಗಳವರೆಗೆ ಮಧ್ಯಮಾವಧಿ / ದೀರ್ಘಾವಧಿ ಕೃಷಿ ಸಾಲಗಳನ್ನು ಶೇಕಡ 3 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ:-** • ಈ ಯೋಜನೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಪಿಕಾರ್ಡ್ ಬ್ಯಾಂಕ್ ಅಥವಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಲ್ಲಿ ರೈತನು ಪಡೆದ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಹಾಗೂ ಕೃಷಿ ಸಂಬಂಧಿತ

		ಸಾಲಗಳಿಗೆ ಅನ್ವಯವಾಗುತ್ತದೆ. • ನಬಾರ್ಡ್ ಗುರುತಿಸಿದ ಕೃಷಿ / ಕೃಷಿ ಸಂಬಂಧಿತ ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲಗಳ ಪೈಕಿ ಲಘು ನೀರಾವರಿ, ಭೂ ಅಭಿವೃದ್ಧಿ, ಕೃಷಿ ಯಾಂತ್ರೀಕರಣ, ಪ್ಲಾಂಟೇಷನ್ ಹಾಗೂ ತೋಟಗಾರಿಕೆ ಅಭಿವೃದ್ಧಿ, ಸಾವಯವ ಕೃಷಿ, ಪಶುಸಂಗೋಪನೆ ಹಾಗೂ ಹೈನುಗಾರಿಕೆ, ಮೀನು ಕೃಷಿ, ರೇಷ್ಮೆ ಕೃಷಿ, ಜೇನು ಸಾಕಾಣಿಕೆ ಉದ್ದೇಶಗಳಿಗೆ ರೈತರಿಗೆ ನೀಡಲಾಗುವ ಸಾಲಗಳಿಗೆ ಮಾತ್ರ ಅನ್ವಯವಾಗುತ್ತದೆ. • ದ್ವಿಚಕ್ರ ವಾಹನ, ಜೀಪು, ಪಿಕಪ್ ವ್ಯಾನ್ ಹಾಗೂ ಇನ್ನು ಮುಂತಾದ ಯಾವುದೇ ಕೃಷಿ ಸಾಗಾಣಿಕೆಗೆ ಬಳಸುವ ವಾಹನ ಸಾಲಗಳಿಗೆ, ತೋಟದ ಮನೆ, ಗ್ರಾಮೀಣ ಗೋದಾಮುಗಳಿಗೆ, ದ್ವಿತೀಯ ಸಂಸ್ಕರಣೆ, ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ/ಆಹಾರ ಸಂಸ್ಕರಣೆ, ಕೃಷಿ ಕ್ಲಿನಿಕ್‌ಗೆ ನೀಡುವ ಸಾಲಗಳಿಗೆ ಈ ಯೋಜನೆ ಅನ್ವಯವಾಗುವುದಿಲ್ಲ • ಈ ಯೋಜನೆಯು ಒಂದು ಕುಟುಂಬಕ್ಕೆ ರೂ.10.00 ಲಕ್ಷಗಳವರೆಗಿನ ಸಾಲಗಳಿಗೆ ಮಾತ್ರ ಅನ್ವಯವಾಗುತ್ತದೆ. • ರೈತನು ಸಹಕಾರ ಸಂಘವು ನಿಗದಿಪಡಿಸಿದ ಗಡುವಿನ ದಿನಾಂಕದೊಳಗೆ ಅಸಲು ಮತ್ತು ಶೇ.3 ರ ಬಡ್ಡಿ ದರದಲ್ಲಿ ಮರುಪಾವತಿಸಬೇಕು.
ಅ)	ಈ ಯೋಜನೆಗಳಲ್ಲಿ ಸಹಾಯಧನ ಹೊಂದಿರುವ ಯೋಜನೆಗಳು ಯಾವುವು?	ರಾಜ್ಯದಲ್ಲಿ ರೈತರಿಗಾಗಿ ಇರುವ ಸಾಲ ಯೋಜನೆಗಳಲ್ಲಿ ಸಹಾಯಧನ ಹೊಂದಿರುವ ಯೋಜನೆಗಳ ವಿವರ ಕೆಳಕಂಡಂತಿರುತ್ತದೆ. 1. ಕುಟುಂಬಕ್ಕೆ ರೂ. 3.00 ಲಕ್ಷಗಳವರೆಗೆ ಶೂನ್ಯ ಬಡ್ಡಿ ದರದಲ್ಲಿ ಅಲ್ಪಾವಧಿ ಬೆಳೆ ಸಾಲ. 2. ಪಶುಸಂಗೋಪನೆ / ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳವಾಗಿ ರೂ.2.00 ಲಕ್ಷಗಳವರೆಗೆ ಶೂನ್ಯ ಬಡ್ಡಿದರದ ಸಾಲದ ಯೋಜನೆ. 3. ಕುಟುಂಬಕ್ಕೆ ರೂ.10.00 ಲಕ್ಷಗಳವರೆಗೆ ಮಧ್ಯಮಾವಧಿ/ ದೀರ್ಘಾವಧಿ ಕೃಷಿ ಸಾಲಗಳನ್ನು ಶೇಕಡ 3 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.
ಇ)	ಈ ಸಾಲ ಯೋಜನೆಗಳ ಲಾಭ ಪಡೆಯಲು ರೈತರು ಅನುಸರಿಸಬೇಕಾಗಿರುವ ನಿಯಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)	ಈ ಸಾಲ ಯೋಜನೆಯ ಲಾಭ ಪಡೆಯಲು ರೈತರು ಅನುಸರಿಸಬೇಕಾಗಿರುವ ನಿಯಮಗಳು ಕೆಳಕಂಡಂತಿರುತ್ತದೆ. 1. ರೈತರು ತಮ್ಮ ಸಾಲದ ಖಾತೆಗಳಲ್ಲಿ ತಪ್ಪದೇ ಆಧಾರ್ ಕಾರ್ಡ್‌ನ ನಕಲು ಪ್ರತಿಯನ್ನು ನೀಡುವುದರೊಂದಿಗೆ ಆಧಾರ್ ಕಾರ್ಡ್ ಬಳಕೆಯ ಘೋಷಣಾ ಪತ್ರವನ್ನು ನೀಡತಕ್ಕದ್ದು. 2. ರೈತನು ಎರಡು ಸಹಕಾರ ಸಂಘದ ಕಾರ್ಯವ್ಯಾಪ್ತಿಯಲ್ಲಿ ಭೂಮಿಯನ್ನು ಹೊಂದಿದ್ದರೆ ಆದ್ಯತೆಯ ಮೇರೆಗೆ ರೈತನು ವಾಸಿಸುವ ವ್ಯಾಪ್ತಿಯ ಸಹಕಾರ ಸಂಘದಲ್ಲಿ ಪಡೆದ ಸಾಲಗಳಿಗೆ ಮೊದಲು ಪಾವತಿಸಿ, ರೂ.3.00 ಲಕ್ಷದ ಮಿತಿಯಲ್ಲಿ ಇತರೆ ಸಂಘದ ವ್ಯಾಪ್ತಿಯಲ್ಲಿ ಪಡೆದ ಸಾಲಗಳಿಗೆ

		3. ನಿಗದಿಪಡಿಸಿದ ಗಡುವು ದಿನಾಂಕದೊಳಗೆ ರೈತರು ಸಾಲ ಮರುಪಾವತಿಸಿದಲ್ಲಿ ಮಾತ್ರ ಕೇಂದ್ರ ಸರ್ಕಾರ ನೀಡುವ ಶೇ.3 ರ ಪ್ರೋತ್ಸಾಹಧನ ಹಾಗೂ ರಾಜ್ಯ ಸರ್ಕಾರದಿಂದ ನೀಡುವ ಶೇ.4 ರ ಬಡ್ಡಿ ಸಹಾಯಧನಕ್ಕೆ ಅರ್ಹರಾಗುತ್ತಾರೆ. 4. ರೈತನು ರೂ.20,000/-ಗಳ ವೇತನ/ಪಿಂಚಣಿ ಪಡೆಯುತ್ತಿದ್ದರೆ ಅಥವಾ ಆದಾಯ ತೆರಿಗೆ ಪಾವತಿದಾರರಾಗಿದ್ದಲ್ಲಿ ಬಡ್ಡಿ ಸಹಾಯಧನ ಲಭಿಸುವುದಿಲ್ಲ.
ಈ)	ರೈತರಿಗಾಗಿ ಸಹಕಾರ ಇಲಾಖೆಯಿಂದ ವಾಹನ ಸಾಲ ಯೋಜನೆ ಜಾರಿಯಲ್ಲಿದೆಯೇ; ಇದ್ದಲ್ಲಿ, ಯಾವ ಯಾವ ವಾಹನಗಳಿಗೆ ಸಾಲ ನೀಡಲಾಗುತ್ತಿದೆ; ಸಬ್ಸಿಡಿಯನ್ನು ಎಷ್ಟು ನೀಡಲಾಗುತ್ತದೆ? (ವಿವರ ನೀಡುವುದು)	ವಾಹನ ಸಾಲ ಯೋಜನೆ ಜಾರಿಯಲ್ಲಿರುವುದಿಲ್ಲ.

ಸಂಖ್ಯೆ: ಸಿಒ 85 ಸಿಎಲ್ಎಸ್ 2021

(ಎಸ್.ಟಿ. ಸೋಮಶೇಖರ್)
ಸಹಕಾರ ಸಚಿವರು